ಡಾ॥ ಪಾಟೀಲ್ ಓಂಪ್ರಕಾಶ್.ಆರ್ ಎಂ.ಡಿ., ಡಿಸಿಹೆಚ್.
ನಿರ್ದೇಶಕರು
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ

Dr. Patil Omprakash.R MD., DCH.
Director
Directorate of Health & Family Welfare Services

ಸಂಖ್ಯೆ:ಆಕುಕನಿ/ಆಪ್ತ/07/20-21

ದಿನಾಂಕ : 06-04-2020

## ಸುತ್ತೋಲೆ

**ವಿಷಯ :** ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಚಿಕಿತ್ಸೆಗಾಗಿ ಬರುವ ಎಲ್ಲಾ ರೋಗಿಗಳನ್ನು ತಪಾಸಣೆ ಮತ್ತು ಚಿಕಿತ್ಸೆ ನೀಡುವ ಬಗ್ಗೆ.

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ, ಕೋವಿಡ್-19 ರಾಜ್ಯದಾದ್ಯಂತ ಹರಡುತ್ತಿರುವ ಹಿನ್ನೆಲೆಯಲ್ಲಿ, ಸಾಮಾನ್ಯ ಶೀತ, ಜ್ವರ, ಕೆಮ್ಮು ಹಾಗೂ ಇತರೆ ತೊಂದರೆಗಳಿಗೆ ಚಿಕಿತ್ಸೆಯನ್ನು ಪಡೆಯಲು ಸರ್ಕಾರಿ ಪ್ರಾಥಮಿಕ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಿಗೆ ಬರುತ್ತಿರುವ ರೋಗಿಗಳಿಗೆ ಸೂಕ್ತ ಚಿಕಿತ್ಸೆಯನ್ನು ನೀಡದೆ ಮೇಲ್ದರ್ಜೆಯ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಆಸ್ಪತ್ರೆಗಳಿಗೆ ನಿರ್ದೇಶಿಸುತ್ತಿರುವುದು ನಮ್ಮ ಗಮನಕ್ಕೆ ಬಂದಿರುತ್ತದೆ.

ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಆಸ್ಪತ್ರೆಗಳಲ್ಲಿ ಅನವಶ್ಯಕವಾಗಿ ಜನದಟ್ಟಣೆಯಾಗುತ್ತಿದ್ದು, ಇದರಿಂದ ಜನರಿಗೆ ಸೂಕ್ತ ಚಿಕಿತ್ಸೆಯು ಸಕಾಲದಲ್ಲಿ ದೊರೆಯುತ್ತಿರುವುದಿಲ್ಲ, ಈ ರೀತಿ ಜಿಲ್ಲಾ ಮಟ್ಟದ ಆಸ್ಪತ್ರೆಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ರೋಗಿಗಳು ಮತ್ತು ರೋಗಿಗಳ ಸಹಾಯಕರು ಆಗಮಿಸುವುದರಿಂದ ವಿವಿಧ ರೀತಿಯ ತೊಂದರೆಗಳಿಗೆ ಅವಕಾಶನೀಡಿದ್ದಂತಾಗುತ್ತದೆ,

ಸದ್ಯದ ಪರಿಸ್ಥಿತಿಯಲ್ಲಿ ರಾಜ್ಯದಾದ್ಯಂತ ನಿಷೇದಾಜ್ಞೆ ಜಾರಿಯಲ್ಲಿರುವುದರಿಂದ ಜನಸಾಮಾನ್ಯರು ಅನಗತ್ಯ ತೊಂದರೆಗಳಿಗೆ ಒಳಗಾಗಬೇಕಾಗುತ್ತದೆ. ಆದುದರಿಂದ ಚಿಕಿತ್ಸೆಗಾಗಿ ಬರುವ ಎಲ್ಲಾ ರೋಗಿಗಳನ್ನು ತಪಾಸಣೆ ನಡೆಸಿ ಸೂಕ್ತ ಚಿಕಿತ್ಸೆಯನ್ನು ತಮ್ಮ ಹಂತದಲ್ಲಿಯೇ ನೀಡುವುದು. ಒಂದು ವೇಳೆ ಹೆಚ್ಚಿನ ಚಿಕಿತ್ಸೆಯ ಅವಶ್ಯವಿದ್ದಲ್ಲಿ ಹತ್ತಿರದ ಮೇಲ್ದರ್ಜೆಯ ಆಸ್ಪತ್ರೆಗೆ ಶಿಫಾರಸ್ಸು ಮಾಡುವುದು. ಕೋವಿಡ್-19ರ ಲಕ್ಷಣಗಳು ಕಂಡು ಬಂದಲ್ಲಿ ತಪಾಸಣೆ ನಡೆಸಿ, ಕೂಡಲೇ ಜಿಲ್ಲಾ ಸರ್ವೇಕ್ಷಣಾಧಿಕಾರಿಗಳಿಗೆ ಮಾಹಿತಿ ನೀಡಿ ಎಚ್ಚರಿಕೆ ಕ್ರಮಗಳೊಂದಿಗೆ ರೋಗಿಯನ್ನು ನಿರ್ದಿಷ್ಟ ಆಸ್ಪತ್ರೆಗೆ ರವಾನಿಸುವಂತೆ ಅಗತ್ಯ ಕ್ರಮಕೈಗೊಳ್ಳಲು ಸೂಚಿಸಿದೆ.

ನಿರ್ದೇಶಕರು
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು**

**ಪ್ರತಿಯನ್ನು:**
ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು.
ಎಲ್ಲಾ ಜಿಲ್ಲಾ ಶಸ್ತ್ರ ಚಿಕಿತ್ಸಕರು, ಎಲ್ಲಾ ಜಿಲ್ಲಾ ಆಸ್ಪತ್ರೆ,
ಎಲ್ಲಾ ಜಿಲ್ಲಾ ಸರ್ವೇಕ್ಷಣಾಧಿಕಾರಿಗಳು.

**ಪ್ರತಿಯನ್ನು ಮಾಹಿತಿಗಾಗಿ:-**
1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
2. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.
3. ಯೋಜನಾ ನಿರ್ದೇಶಕರು, (ಐ.ಡಿ.ಎಸ್.ಪಿ.), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
4. ಸಹ ನಿರ್ದೇಶಕರು, ಸಿ.ಎಂ.ಡಿ./ ವೈದ್ಯಕೀಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.